## <u>ಕರ್ನಾಟಕ ಲೋಕ ಸೇವಾ ಆಯೋಗ</u>

**ಸಂಖ್ಯೆ: ಇ(3) 321(ಎ)/2020-21/ಪಿಎಸ್‌ಸಿ** ದಿನಾಂಕ:10-03-2021.
ಜಾರಿ ಸಂಖ್ಯೆ:ಇ(3)3616/20-21/ಪಿಎಸ್‌ಸಿ

### <u>ಪ್ರಕಟಣೆ</u>

ಆಯೋಗದ ಅಧಿಸೂಚನೆ ಸಂಖ್ಯೆ:ಇ(3)800/2019-20/ಪಿಎಸ್‌ಸಿ, ಇ(3)801/2019-20/ಪಿಎಸ್‌ಸಿ, ದಿನಾಂಕ:29-02-2020 ಮತ್ತು ಸೇರ್ಪಡೆ ಅಧಿಸೂಚನೆ ಸಂಖ್ಯೆ:ಇ(3)4(ಎ)/2020-21/ಪಿಎಸ್‌ಸಿ ದಿನಾಂಕ:14-05-2020ರ ಅಧಿಸೂಚನೆಗಳನ್ವಯ ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 2019ನೇ ಸಾಲಿನ ದ್ವಿತೀಯ ದರ್ಜೆ ಸಹಾಯಕರು/ಕಿರಿಯ ಸಹಾಯಕರು ಹುದ್ದೆಗಳನ್ನು ಅಧಿಸೂಚಿಸಲಾಗಿದ್ದು, ಈ ನೇಮಕಾತಿಗೆ ಸಂಬಂಧಿಸಿದಂತೆ, ದಿನಾಂಕ:06-06-2020ರಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಮತ್ತು ದಿನಾಂಕ:07-06-2020ರಂದು ಎರಡು ಅಧಿವೇಶನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ನಿಗದಿಪಡಿಸಲಾಗಿತ್ತು. ಆದರೆ, ಕೊರೋನಾ ವೈರಸ್ (ಕೋವಿಡ್-19) ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸದರಿ ಪರೀಕ್ಷೆಗಳನ್ನು ಮುಂದೂಡಿ, ದಿನಾಂಕ:20-03-2021ರಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಮತ್ತು ದಿನಾಂಕ:21-03-2021ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ದಿನಾಂಕಗಳನ್ನು ಮರುನಿಗದಿಪಡಿಸಿ ತಾತ್ಕಾಲಿಕ ವೇಳಾಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿರುತ್ತದೆ.

ಏತನ್ಮಧ್ಯೆ, ದಿನಾಂಕ:24-01-2020ರಂದು ಆಯೋಗದಿಂದ ನಡೆಯಬೇಕಾಗಿದ್ದ ಪ್ರಥಮ ದರ್ಜೆ ಸಹಾಯಕರು /ಸಹಾಯಕರು ಹುದ್ದೆಗಳ ಪರೀಕ್ಷೆಗಳನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಿ, ದಿನಾಂಕ:28-02-2021ರಂದು ನಡೆಸಲಾಗಿರುವುದರಿಂದ, ಸದರಿ ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಪರೀಕ್ಷೆಗಳ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲು ಆಯೋಗಕ್ಕೆ ಇನ್ನೂ ಹೆಚ್ಚಿನ ಕಾಲಾವಕಾಶದ ಅವಶ್ಯಕತೆ ಇರುತ್ತದೆ.

ಈ ಹಿನ್ನೆಲೆಯಲ್ಲಿ, 2019ನೇ ಸಾಲಿನ ದ್ವಿತೀಯ ದರ್ಜೆ ಸಹಾಯಕರು/ಕಿರಿಯ ಸಹಾಯಕರ ಹುದ್ದೆಗಳಿಗೆ ಸಂಬಂಧಿಸಿದಂತೆ, ಪ್ರಸ್ತುತ <u>**ದಿನಾಂಕ:20-03-2021 (ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ) ಮತ್ತು 21-03-2021ರಂದು (ಸ್ಪರ್ಧಾತ್ಮಕ ಪರೀಕ್ಷೆ) ನಡೆಯಬೇಕಾದ ಪರೀಕ್ಷೆಗಳನ್ನು ಮುಂದೂಡಲಾಗಿದೆ.**</u> ಮುಂದುವರೆದು, ಪರೀಕ್ಷೆಗಳ ಪರಿಷ್ಕೃತ ದಿನಾಂಕದ ವೇಳಾಪಟ್ಟಿಯನ್ನು ಶೀಘ್ರವಾಗಿ ಪ್ರಕಟಿಸಲಾಗುವುದೆಂದು ಈ ಮೂಲಕ ತಿಳಿಸಿದೆ.

10.3.2021
(ಜಿ. ಸತ್ಯವತಿ)
ಕಾರ್ಯದರ್ಶಿ
ಕರ್ನಾಟಕ ಲೋಕ ಸೇವಾ ಆಯೋಗ.